**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| **ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು** | : | **ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮ ನಿರ್ದೇಶನ ಹೊಂದಿದವರು)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **787** |
| **ಉತ್ತರಿಸಬೇಕಾದ ದಿನಾಂಕ** | : | **23-07-2024** |
| **ಉತ್ತರಿಸಬೇಕಾದ ಸಚಿವರು** | : | **ಸಹಕಾರ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸಹಕಾರ ಬ್ಯಾಂಕ್‌ಗಳಲ್ಲಿ ಪ್ರಸ್ತುತ ಸಾಲಿನಲ್ಲಿ ಎಷ್ಟು ಜನ ರೈತರು ಬೆಳೆ ಸಾಲಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ; | ವಿಜಯಪುರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸಹಕಾರ ಬ್ಯಾಂಕುಗಳಲ್ಲಿ ಪ್ರಸ್ತುತ ಸಾಲಿನಲ್ಲಿ ಅಂದರೆ ದಿನಾಂಕ:01.04.2024 ರಿಂದ ದಿನಾಂಕ: 30.06.2024 ರವರೆಗೆ ಒಟ್ಟು 27,070 ರೈತರು ಬೆಳೆ ಸಾಲಕ್ಕಾಗಿ ಅರ್ಜಿ ಸಲ್ಲಿಸಿರುತ್ತಾರೆ. |
| ಆ) | ಅವರುಗಳಲ್ಲಿ ಇದುವರೆಗೂ ಎಷ್ಟು ರೈತರಿಗೆ ಬೆಳೆ ಸಾಲ ನೀಡಲಾಗಿದೆ; (ವಿವರ ನೀಡುವುದು) | ಅವರುಗಳಲ್ಲಿ ಇದುವರೆಗೆ 24,629 ರೈತರಿಗೆ ರೂ.182.41 ಕೋಟಿ ಬೆಳೆ ಸಾಲ ನೀಡಲಾಗಿದೆ. ಇನ್ನು ಬಾಕಿ ಉಳಿದ 2,441 ರೈತರಿಗೆ ಸಾಲ ವಿತರಿಸುವ ಪ್ರಕ್ರಿಯೆ ಜಾರಿಯಲ್ಲಿದೆ. |
| ಇ) | ಸಹಕಾರ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಪಡೆಯಲು ಇರುವ ಮಾನದಂಡಗಳೇನು?<br>(ವಿವರ ನೀಡುವುದು) | ಸಹಕಾರ ಬ್ಯಾಂಕುಗಳಲ್ಲಿ ಬೆಳೆ ಸಾಲ ಪಡೆಯಲು ಕೆಳಕಂಡ ಮಾನದಂಡಗಳನ್ನು ನಿಗದಿಪಡಿಸಲಾಗಿದೆ.<br><br>1. ರೈತನ ಭೂಮಿ ಅಥವಾ ವಾಸ ಸ್ಥಳ ಇರುವ ಪ್ರಾಥಮಿಕ ಸಹಕಾರ ಸಂಘದಲ್ಲಿ ರೈತನು ಸಾಲಕ್ಕಾಗಿ ಅರ್ಜಿ ಸಲ್ಲಿಸಬೇಕು. ಅರ್ಜಿದಾರರ ವ್ಯಾಪ್ತಿಯ ಸಹಕಾರ ಸಂಘ ನಿಷ್ಕ್ರಿಯವಾಗಿದ್ದಲ್ಲಿ ಸಂಬಂಧಿಸಿದ ಡಿಸಿಸಿ ಬ್ಯಾಂಕಿನಲ್ಲಿ ಅರ್ಜಿ ಸಲ್ಲಿಸಬೇಕು.<br><br>2. ರೈತನು ಸಾಲ ಪಡೆಯಲು ನೀಡುವ ಭೂ ದಾಖಲೆಗಳಲ್ಲಿ ಇತರೇ ಯಾವುದೇ ಬ್ಯಾಂಕಿನಿಂದ ಸಾಲ ಪಡೆದಿರಬಾರದು. |

| | | |
|---|---|---|
| | | 3. ಅಲ್ಪಾವಧಿ ಕೃಷಿ ಸಾಲ ವಿತರಿಸಲು ರೈತನು ಹೊಂದಿರುವ ಭೂಹಿಡುವಳಿಗೆ ಮತ್ತು ಬೆಳೆಯುವ ಬೆಳೆಗೆ, ರಾಜ್ಯ ತಾಂತ್ರಿಕ ಸಲಹಾ ಸಮಿತಿ ಪ್ರತಿ ಬೆಳೆಗೆ ನಿಗಧಿಪಡಿಸಿದ ಸ್ಕೇಲ್ ಆಫ್ ಫೈನಾನ್ಸ್ ಪ್ರಕಾರ ಬೆಳೆ ಸಾಲದ ಗರಿಷ್ಟ ಮಿತಿಯಾದ ಕ್ರಮಿಕ ಪತ್ತಿನ ಮಿತಿಗೆ ಸಂಬಂಧಿಸಿದ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿಂದ ಅನುಮೋದನೆ ಪಡೆದಿರತಕ್ಕದ್ದು ಹಾಗೂ ಬೆಳೆ ವಿಮೆ ಒಳಗೊಂಡಂತೆ ಸದರಿ ಮಿತಿ ಅಥವಾ ರೂ.5.00 ಲಕ್ಷ ಯಾವುದು ಕಡಿಮೆಯೋ ಆ ಮಿತಿಗೆ ಮಾತ್ರ ಸಾಲ ದೊರೆಯುತ್ತದೆ.<br><br>4. ಸಹಕಾರ ಸಂಘಗಳು ಹೆಚ್ಚಿನ ಪ್ರಮಾಣದ ಸಾಲ ವಿತರಿಸಿದ್ದರೂ ಸಹ ಶೂನ್ಯ ಬಡ್ಡಿದರ ಗರಿಷ್ಠ ರೂ.5.00 ಲಕ್ಷಗಳವರೆಗಿನ ಸಾಲಕ್ಕೆ ಮಾತ್ರ ಅನ್ವಯವಾಗುತ್ತದೆ.<br><br>5. ರೈತನು ಪಡೆದ ಸಾಲವನ್ನು ಸಹಕಾರ ಸಂಘವು ನಿಗದಿಪಡಿಸಿದ ಗಡುವು ದಿನಾಂಕ, ಅಥವಾ ಒಂದು ವರ್ಷ ಇದರಲ್ಲಿ ಯಾವುದು ಕಡಿಮೆಯೋ ಆ ಅವಧಿಯಲ್ಲಿ ಮರುಪಾವತಿಸಿದಲ್ಲಿ ಮಾತ್ರ ಬಡ್ಡಿ ಸಹಾಯಧನ ಲಭ್ಯವಾಗುತ್ತದೆ. |

**ಸಂಖ್ಯೆ: ಸಿಒ 168 ಸಿಎಲ್ಎಸ್ 2024**

(ಕೆ.ಎನ್.ರಾಜಣ್ಣ)
ಸಹಕಾರ ಸಚಿವರು